# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದಕೀಯ & ದಂತ ವೈದ್ಯಕೀಯ ಅಭ್ಯರ್ಥಿಗಳಿಗೆ ಧಾರ್ಮಿಕ ಅಲ್ಪಸಂಖ್ಯಾತರ ಪ್ರಮಾಣ ಪತ್ರಗಳನ್ನು ನೀಡಲು ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರ್‌ಗಳನ್ನು ಸಕ್ಷಮ ಪ್ರಾಧಿಕಾರವನ್ನಾಗಿ ಮಾಡುವ ಬಗ್ಗೆ.

ಓದಲಾಗಿದೆ:
1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ದಿ:28-02-2018ರ ಪತ್ರ ಸಂಖ್ಯೆ: ED/KEA/ ADM/CR-11/2017-18.
2. ವೈದ್ಯಕೀಯ ಶಿಕ್ಷಣ ಇಲಾಖೆಯ ಕಡತ ಸಂಖ್ಯೆ;ಅಕುಕ 78 ಆರ್‌ಜೆಯು 2018.

<><><>

**ಪ್ರಸ್ತಾವನೆ:-**

ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದಕೀಯ & ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಯಲ್ಲಿ ಕೆಲವು ಸೀಟುಗಳನ್ನು ಧಾರ್ಮಿಕ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಮೀಸಲಿಡಬೇಕಾಗಿದ್ದು, ಸದರಿ ಸೌಲಭ್ಯವನ್ನು ಪಡೆಯಲು ಆ ವಿದ್ಯಾರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಧಾರ್ಮಿಕ ಅಲ್ಪಸಂಖ್ಯಾತ ಪ್ರಮಾಣ ಪತ್ರವನ್ನು ಒದಗಿಸಬೇಕಾಗಿರುತ್ತದೆ. ಆದರೆ ಸದರಿ ಪ್ರಮಾಣ ಪತ್ರವನ್ನು ಹೊರಡಿಸಲು ಯಾವುದೇ ನಿರ್ದಿಷ್ಟ ಅಧಿಸೂಚನೆ ಅಥವಾ ಸರ್ಕಾರಿ ಆದೇಶವಿರುವುದಿಲ್ಲವಾದ್ದರಿಂದ ಈ ಪ್ರಮಾಣ ಪತ್ರಗಳನ್ನು ಹೊರಡಿಸಲು ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರ್‌ಗಳನ್ನು ಸಕ್ಷಮ ಪ್ರಾಧಿಕರವನ್ನಾಗಿ ನೇಮಿಸಿ ಸೂಕ್ತ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ (1)ರ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ಕೋರಿರುತ್ತಾರೆ. ಅದರನ್ವಯ ವೈದ್ಯಕೀಯ ಶಿಕ್ಷಣ ಇಲಾಖೆಯು ಮೇಲೆ ಓದಲಾದ (2) ರ ಕಡತದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದ್ಯಕೀಯ & ದಂತ ವೈದ್ಯಕೀಯ ಅಭ್ಯರ್ಥಿಗಳಿಗೆ ಧಾರ್ಮಿಕ ಅಲ್ಪಸಂಖ್ಯಾತ ಪ್ರಮಾಣ ಪತ್ರಗಳನ್ನು ನೀಡಲು ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರ್‌ಗಳನ್ನು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 330 MDS 2018, ಬೆಂಗಳೂರು,ದಿನಾಂಕ:13-06-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಸ್ನಾತಕ/ಸ್ನಾತಕೋತ್ತರ ವೈದಕೀಯ & ದಂತ ವೈದ್ಯಕೀಯ ಅಭ್ಯರ್ಥಿಗಳಿಗೆ ಧಾರ್ಮಿಕ ಅಲ್ಪಸಂಖ್ಯಾತ ಪ್ರಮಾಣ ಪತ್ರಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆ **IV(A)** ರಲ್ಲಿ ನೀಡಲು ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರ್‌ಗಳನ್ನು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಿಸಿ ಆದೇಶಿಸಿದೆ.

...2

ಈ ಆದೇಶವನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಅಕ್ರಂಭಾಷ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ
13/6/18

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆಕುಕ ಇಲಾಖೆ (ವೈದ್ಯಕೀಯ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.
6. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು/ಉಪ ವಿಭಾಗಾಧಿಕಾರಿಗಳು/ತಾಲ್ಲೂಕು ತಹಶೀಲ್ದಾರ್‌ಗಳಿಗೆ- ಕಂದಾಯ ಇಲಾಖೆಯ ಮುಖಾಂತರ.
8. ಕುಲಸಚಿವರು. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು-560041.
9. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
10. ಸರ್ಕಾರದ ವಿಶೇಷ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

D/RM/G.O

## ANNEXTURE IV(A)

## PROFORMA FOR RELIGIOUS MINIROTY CERTIFICATE

This is to certify that Kum/Sri/Smt......................Son/Daughter of ..............................has studied from.....................standard to ......................standard from................to........................in ...............................institution located at.............................. He/She belongs to ........................religion.

This Certificate is used for the purpose of seeking admission to under Graduate/Post Graduate Medical/Dental courses for the year................

Name:.....................
Tahsildar

Place:.................. ......................Taluka
Date:.................... ......................District